**All India Radio: Bangalore**
**National Bulletin In Kannada**
**11.04.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**11.04.2026 1.10 p.m.**

**<><><><>**

ಮುಖ್ಯಾಂಶಗಳು

1. ಸಮಾಜ ಸುಧಾರಕ, ಮಹಾತ್ಮ ಜ್ಯೋತಿಬಾ ಫುಲೆ ಅವರ ೨೦೦ನೇ ಜನ್ಮ ವಾರ್ಷಿಕೋತ್ಸವ ಇಂದು; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿ ಗಣ್ಯರಿಂದ ಗೌರವನಮನ
2. ಪಶ್ಚಿಮ ಏಷ್ಯಾ ಸಂಘರ್ಷ; ಇಸ್ಲಾಮಾಬಾದ್‌ನಲ್ಲಿ ಕೆಲವೇ ಹೊತ್ತಿನಲ್ಲಿ ಅಮೆರಿಕ - ಇರಾನ್ ಉನ್ನತ ಮಟ್ಟದ ನಿಯೋಗಗಳ ನಡುವೆ ಮಾತುಕತೆ
3. ಕೇಂದ್ರ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ನಾಳೆಯಿಂದ ಇದೇ ೧೪ ರವರೆಗೆ ಪ್ಯಾರಿಸ್ ಮತ್ತು ಬರ್ಲಿನ್‌ಗೆ ಅಧಿಕೃತ ಭೇಟಿ
4. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಪಂಜಾಬ್ ಕಿಂಗ್ಸ್ - ಸನ್ ರೈಸರ್ಸ್ ಹೈದರಾಬಾದ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ -ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿ

<><><><>

ಸಮಾಜ ಸುಧಾರಕ ಮಹಾತ್ಮ ಜ್ಯೋತಿಬಾ ಫುಲೆ ಅವರ ೨೦೦ನೇ ಜನ್ಮ ವಾರ್ಷಿಕೋತ್ಸವದಂದು ದೇಶವು ಅವರಿಗೆ ಗೌರವ ನಮನ ಸಲ್ಲಿಸುತ್ತಿದೆ. ೧೮೨೭ ರ ಈ ದಿನದಂದು ಜನಿಸಿದ ಮಹಾತ್ಮ ಜ್ಯೋತಿಬಾ ಫುಲೆ ಮತ್ತು ಅವರ ಪತ್ನಿ ಸಾವಿತ್ರಿ ಫುಲೆ ಅವರು ಜಾತಿ ವ್ಯವಸ್ಥೆ ಮತ್ತು ಅಸ್ಪೃಶ್ಯತೆಯನ್ನು ತೊಡೆದುಹಾಕಲು ಹೋರಾಡುವುದರ ಜೊತೆಗೆ ಮಹಿಳಾ ಶಿಕ್ಷಣ ಹಾಗೂ ಸಬಲೀಕರಣದ ಉದ್ದೇಶವನ್ನು ಪ್ರತಿಪಾದಿಸಿದ್ದರು. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ..ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕೇಂದ್ರ ಸಚಿವರಾದ ಅಮಿತ್ ಶಾ, ಜೆ.ಪಿ.ನಡ್ಡಾ ಸೇರಿದಂತೆ ಇತರ ಪ್ರಮುಖ ಸಂಸದರು ಮತ್ತು ಗಣ್ಯರು ಸಂಸತ್ ಭವನದ ಆವರಣದಲ್ಲಿರುವ ಪ್ರೇರಣಾ ಸ್ಥಳದಲ್ಲಿಂದು ಜ್ಯೋತಿಬಾ ಫುಲೆ ಪುತ್ಥಳಿಗೆ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ

ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಸಾಮಾಜಿಕ ಮಾಧ್ಯಮದಲ್ಲಿ ಮಹಾತ್ಮ ಜ್ಯೋತಿಬಾ ಫುಲೆ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಜ್ಯೋತಿಬಾ ಫುಲೆ ಅವರು ಅಂಚಿನಲ್ಲಿರುವ ಸಮುದಾಯಗಳ ಉನ್ನತಿಗಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದರು. ಮಹಿಳಾ ಶಿಕ್ಷಣದ ಪ್ರಗತಿಗೆ ಅವರ ಕೊಡುಗೆ ಮಹತ್ವದ್ದು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ತಮ್ಮ ಸಂದೇಶದಲ್ಲಿ ಹೆಚ್ಚು ನ್ಯಾಯಯುತ ಮತ್ತು ಸಮಾನ ಸಮಾಜಕ್ಕೆ ಅಡಿಪಾಯ ಹಾಕುವಲ್ಲಿ ಮಹಾತ್ಮ ಫುಲೆ ಅವರ ಅವಿರತ ಪ್ರಯತ್ನಗಳನ್ನು ಸ್ಮರಿಸಿದ್ದಾರೆ. ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಸಬಲೀಕರಣದ ಆದರ್ಶಗಳು ಎಲ್ಲಾ ಪೀಳಿಗೆಗೆ ಎಲ್ಲರನ್ನೂ ಒಳಗೊಳ್ಳುವ ಭಾರತವನ್ನು ನಿರ್ಮಿಸಲು ಸ್ಫೂರ್ತಿ ನೀಡುತ್ತಲೇ ಇರಲಿ ಎಂದು ಅವರು ಹಾರೈಸಿದ್ದಾರೆ. ಜ್ಯೋತಿಬಾ ಫುಲೆ ಅವರ ನೈತಿಕ ಧೈರ್ಯ, ಆತ್ಮಾವಲೋಕನ ಮತ್ತು ಸಮಾಜದ ಕಲ್ಯಾಣಕ್ಕಾಗಿ ಅಚಲ ಸಮರ್ಪಣೆ ಸ್ಫೂರ್ತಿದಾಯಕತ್ವಕ್ಕೆ ಉದಾಹರಣೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ. ಜಾತಿ ತಾರತಮ್ಯ ಮತ್ತು ಅಸಮಾನತೆಗಳ ವಿರುದ್ಧ ಮಹಾತ್ಮ ಫುಲೆ ಅವರ ಹೋರಾಟವು ಕೇವಲ ಒಂದು ಚಳವಳಿಯಲ್ಲ, ಅದು ಭಾರತದ ಪ್ರಜ್ಞೆಗೆ ಹೊಸ ದಿಕ್ಕನ್ನು ನೀಡಿದ ಸಮಗ್ರ ಸಾಮಾಜಿಕ ಜಾಗೃತಿಯಾಗಿದೆ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ, ಜ್ಯೋತಿಬಾ ಫುಲೆ ಅವರು ಸತ್ಯಶೋಧಕ ಸಮಾಜವನ್ನು ಸ್ಥಾಪಿಸುವ ಮೂಲಕ ಸಮಾಜದಲ್ಲಿ ಸಮಾನತೆ, ನ್ಯಾಯ ಮತ್ತು ಸಾಮಾಜಿಕ ಸಾಮರಸ್ಯವನ್ನು ಉತ್ತೇಜಿಸುವಲ್ಲಿ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಹೇಳಿದ್ದಾರೆ. ಜ್ಯೋತಿಬಾ ಫುಲೆ ಅವರ ಜನ್ಮ ವಾರ್ಷಿಕೋತ್ಸವದಂದು ದೇಶದ ವಿವಿಧ ಭಾಗಗಳಲ್ಲಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

<><><>

ಪಶ್ಚಿಮ ಏಷ್ಯಾ ಸಂಘರ್ಷವನ್ನು ಕೊನೆಗೊಳಿಸಲು ಅಮೆರಿಕ ಮತ್ತು ಇರಾನ್‌ನ ಉನ್ನತ ಮಟ್ಟದ ನಿಯೋಗಗಳು ಇಸ್ಲಾಮಾಬಾದ್‌ನಲ್ಲಿ ಇಂದು ಮಾತುಕತೆ ಪ್ರಾರಂಭಿಸಲಿವೆ. ಉಪಾಧ್ಯಕ್ಷ ಜೆಡಿ ವ್ಯಾನ್ಸ್ ನೇತೃತ್ವದ ಅಮೆರಿಕ ನಿಯೋಗ ಇಸ್ಲಾಮಾಬಾದ್ ತಲುಪಿದೆ. ನಿಯೋಗದಲ್ಲಿ ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್ ಮತ್ತು ಸಲಹೆಗಾರ ಜೇರೆಡ್ ಕುಶ್ನರ್ ಸೇರಿದ್ದಾರೆ. ಪಾಕಿಸ್ತಾನಕ್ಕೆ ತೆರಳುವ ಮೊದಲು, ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಫಲಪ್ರದ ಮಾತುಕತೆಯನ್ನು ಎದುರು

ನೋಡುತ್ತಿರುವುದಾಗಿ ಹೇಳಿದ್ದು, ಅದು ಸಕಾರಾತ್ಮಕವಾಗಿರುತ್ತದೆ ಎಂದು ಆಶಿಸಿದ್ದಾರೆ. ಇರಾನಿಯನ್ನರು ಉತ್ತಮ ನಂಬಿಕೆಯೊಂದಿಗೆ ಮಾತುಕತೆ ನಡೆಸಲು ಸಿದ್ಧರಿದ್ದರೆ, ಅಮೆರಿಕ ಖಂಡಿತವಾಗಿಯೂ ವಂಚಿಸಲು ಕೈ ಚಾಚಲು ಸಿದ್ಧವಾಗಿದೆ, ಆದರೆ ಅವರು ಅಮೆರಿಕಾಕ್ಕೆ ಆಟವಾಡಲು ಪ್ರಯತ್ನಿಸಿದರೆ, ಮಾತುಕತೆ ನಿಯೋಗವು ಅಷ್ಟೊಂದು ಸ್ವೀಕಾರಾರ್ಹವಲ್ಲ ಎಂದು ಅವರು ಹೇಳಿದ್ದಾರೆ. ಇರಾನ್ ನಿಯೋಗವನ್ನು ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಘರ್ ಗಾಲಿಬಾಫ್ ಪ್ರತಿನಿಧಿಸಲಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಲೆಬನಾನ್‌ನಲ್ಲಿ ಕದನ ವಿರಾಮ ಮತ್ತು ಮಾತುಕತೆ ಪ್ರಾರಂಭವಾಗುವ ಮೊದಲು ಇರಾನ್‌ನ ನಿರ್ಬಂಧಿತ ಆಸ್ತಿಗಳನ್ನು ಬಿಡುಗಡೆ ಮಾಡುವುದು ಸೇರಿದಂತೆ ಪಕ್ಷಗಳ ನಡುವೆ ಪರಸ್ಪರ ಒಪ್ಪಿಕೊಂಡ ಎರಡು ಕ್ರಮಗಳನ್ನು ಇನ್ನೂ ಜಾರಿಗೆ ತರಬೇಕಾಗಿದೆ ಎಂದು ಹೇಳಿದ್ದಾರೆ. ಮಾತುಕತೆಗಳು ಪ್ರಾರಂಭವಾಗುವ ಮೊದಲು ಈ ಎರಡು ವಿಷಯಗಳನ್ನು ಪೂರೈಸಬೇಕು ಎಂದು ಬಘರ್ ಗಾಲಿಬಾಫ್ ತಿಳಿಸಿದ್ದಾರೆ. ಇರಾನ್‌ನ ಪರಮಾಣು ಪುಷ್ಟೀಕರಣ ಕಾರ್ಯಕ್ರಮ, ಬ್ಯಾಲಿಸ್ಟಿಕ್ ಕ್ಷಿಪಣಿ ಅಭಿವೃದ್ಧಿ ಮತ್ತು ಹೊರ್ಮುಜ್ ಜಲಸಂಧಿಯ ಕುರಿತು ಮೇಲೆ ಮಾತುಕತೆಗಳು ಗಮನಹರಿಸುವ ನಿರೀಕ್ಷೆಯಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ ಎರಡು ವಾರಗಳ ಕದನ ವಿರಾಮದ ನಂತರ ಮಹತ್ವದ ಮಾತುಕತೆಗಳು ನಡೆಯಲಿವೆ.

<><><><>

ಕೇಂದ್ರ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ನಾಳೆಯಿಂದ ಇದೇ ೧೪ ರವರೆಗೆ ಪ್ಯಾರಿಸ್ ಮತ್ತು ಬರ್ಲಿನ್‌ಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಪ್ಯಾರಿಸ್‌ನಲ್ಲಿ ಅವರು, ಫ್ರಾನ್ಸ್ ವಿದೇಶಾಂಗ ಸಚಿವಾಲಯದ ಪ್ರಧಾನ ಕಾರ್ಯದರ್ಶಿ ಮಾರ್ಟಿನ್ ಬ್ರಿಯಾನ್ಸ್ ಅವರೊಂದಿಗೆ ಭಾರತ-ಫ್ರಾನ್ಸ್ ವಿದೇಶಾಂಗ ಕಚೇರಿ ಸಮಾಲೋಚನೆಗಳ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ. ರಕ್ಷಣೆ, ಈ ಸಂದರ್ಭದಲ್ಲಿ ಪರಮಾಣು ಶಕ್ತಿ, ಬಾಹ್ಯಾಕಾಶ, ಸೈಬರ್ ಮತ್ತು ಡಿಜಿಟಲ್, ಕೃತಕಬುದ್ಧಿಮತ್ತೆ, ನಾವೀನ್ಯತೆ ಮತ್ತು ಸಾಂಸ್ಕೃತಿಕ ಸಂಬಂಧಗಳನ್ನು ಬೆಳೆಸುವ ಉಪಕ್ರಮಗಳು ಸೇರಿದಂತೆ ವ್ಯಾಪಕ ಶ್ರೇಣಿಯ ವಿಷಯಗಳ ಕುರಿತು ಚರ್ಚೆ ನಡೆಯಲಿವೆ. ಇತ್ತೀಚಿನ ಜಾಗತಿಕ ಮತ್ತು ಪ್ರಾದೇಶಿಕ ಬೆಳವಣಿಗೆಗಳ ಬಗ್ಗೆಯೂ ಚರ್ಚಿಸಲಾಗುವುದು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಬರ್ಲಿನ್‌ನಲ್ಲಿ, ವಿದೇಶಾಂಗ ಕಾರ್ಯದರ್ಶಿ, ಜರ್ಮನ್ ವಿದೇಶಾಂಗ ಕಚೇರಿಯ ರಾಜ್ಯ ಕಾರ್ಯದರ್ಶಿ ಡಾ.ಗೆಜಾ

ಆಂಡ್ರಿಯಾಸ್ ವಾನ್ ಗೇರ್ ಅವರೊಂದಿಗೆ ಭಾರತ-ಜರ್ಮನಿ ವಿದೇಶಾಂಗ ಕಚೇರಿ ಸಮಾಲೋಚನೆಗಳ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ. ಚರ್ಚೆಯು, ವ್ಯಾಪಾರ ಮತ್ತು ಹೂಡಿಕೆಗಳು, ರಕ್ಷಣೆ ಹಾಗೂ ಭದ್ರತೆ, ತಂತ್ರಜ್ಞಾನ, ಹಸಿರು ಶಕ್ತಿ, ಶಿಕ್ಷಣ ಹಾಗೂ ಪರಸ್ಪರ ಆಸಕ್ತಿಯ ಜಾಗತಿಕ ಮತ್ತು ಪ್ರಾದೇಶಿಕ ವಿಷಯಗಳು ಸೇರಿದಂತೆ ದ್ವಿಪಕ್ಷೀಯ ಸಹಕಾರದ ವೈವಿಧ್ಯಮಯ ಕ್ಷೇತ್ರಗಳನ್ನು ಒಳಗೊಂಡಿರುತ್ತವೆ.

<><><>

ಪ್ರಧಾನಿ ನರೇಂದ್ರ ಮೋದಿ ಇದೇ ೧೫ರಂದು ಕರ್ನಾಟಕದ ಮಂಡ್ಯ ಜಿಲ್ಲೆ ನಾಗಮಂಗಲ ತಾಲೂಕಿನ ಆದಿಚುಂಚನಗಿರಿ ಮಹಾಸಂಸ್ಥಾನ ಮಠಕ್ಕೆ ಭೇಟಿ ನೀಡುವ ಹಿನ್ನೆಲೆಯಲ್ಲಿ ಶಿಷ್ಟಾಚಾರದಂತೆ ಅಧಿಕಾರಿಗಳು ಕೆಲಸ ನಿರ್ವಹಣೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಧಿಕಾರಿಗಳ ತುರ್ತು ಸಭೆ ನಡೆಸಿದ ಅವರು, ಆದಿಚುಂಚನಗಿರಿ ಮಹಾಸಂಸ್ಥಾನ ಮಠದಲ್ಲಿ ನಿರ್ಮಿಸಲಾಗಿರುವ ಡಾ.ಬಾಲಗಂಗಾಧರನಾಥ ಮಂದಿರದ ಲೋಕಾರ್ಪಣೆ ಮತ್ತು ವಿಗ್ರಹ ಪ್ರಾಣ ಪ್ರತಿಷ್ಠಾಪನಾ ಕಾರ್ಯವನ್ನು ಪ್ರಧಾನಿ ನೆರವೇರಿಸಲಿದ್ದಾರೆ. ನಂತರ ಬಿಜಿಎಸ್ ಕ್ರೀಡಾಂಗಣದಲ್ಲಿ ಬೃಹತ್ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

ಪಾರ್ಕಿನ್ಸನ್ ಕಾಯಿಲೆಯ ಬಗ್ಗೆ ಜಾಗೃತಿ ಮೂಡಿಸಲು ಇಂದು ಜಗತ್ತಿನಾದ್ಯಂತ 'ವಿಶ್ವ ಪಾರ್ಕಿನ್ಸನ್' ದಿನವನ್ನು ಆಚರಿಸಲಾಗುತ್ತಿದೆ, ಈ ಕಾಯಿಲೆಯು, ಒಂದು ರೀತಿಯ ನರ ಕ್ಷೀಣಗೊಳ್ಳುವ ಅಸ್ವಸ್ಥತೆಯಾಗಿದೆ. ಈ ವರ್ಷದ ಘೋಷಾವಾಕ್ಯ 'ಆರೈಕೆಯ ಅಂತರವನ್ನು ಕಡಿಮೆ ಮಾಡುವುದು'. ಎಂಬುದಾಗಿದೆ.ತಿಂದಿನದಿನದ ಉದ್ದೇಶ, ಜನರಿಗೆ ಈ ಸ್ಥಿತಿಯ ಬಗ್ಗೆ ಶಿಕ್ಷಣ ನೀಡುವುದು, ಆರಂಭಿಕ ರೋಗನಿರ್ಣಯವನ್ನು ಪತ್ತೆ ಹಚ್ಚುವುದು ಉತ್ತಮ ಆರೈಕೆ ಮತ್ತು ಸಂಶೋಧನೆಯನ್ನು ಪ್ರತಿಪಾದಿಸುವುದಾಗಿದೆ.

<><><>

ಭಾರತದ ಏಕೀಕೃತ ಪಾವತಿ ಇಂಟರ್ಫೇಸ್-ಯುಪಿಐ ಇಂದು ತನ್ನ ಕಾರ್ಯಾಚರಣೆಯಲ್ಲಿ ೧೦ ವರ್ಷಗಳನ್ನು ಪೂರೈಸಿದೆ. ದಶಕದಲ್ಲಿ, ಯುಪಿಐ ಪ್ರಾಯೋಗಿಕ ಕಾರ್ಯಕ್ರಮವು ಭಾರತೀಯ

ಪಾವತಿಗಳ ಬೆನ್ನೆಲುಬಾಗಿ ರೂಪಾಂತರಗೊಂಡಿದೆ, ರಾಷ್ಟ್ರವನ್ನು ನಗದು-ಆಧಾರಿತ ಆರ್ಥಿಕತೆಯಿಂದ ನೈಜ-ಸಮಯದ ಡಿಜಿಟಲ್ ಪಾವತಿ ವ್ಯವಸ್ಥೆಗೆ ಪರಿವರ್ತಿಸಿದೆ.

<><><><>

ಏಪ್ರಿಲ್ ೩ ಕ್ಕೆ ಕೊನೆಗೊಂಡ ವಾರದಲ್ಲಿ ಭಾರತದ ವಿದೇಶಿ ವಿನಿಮಯ ಮೀಸಲು ೯ ಬಿಲಿಯನ್ ಅಮೆರಿಕನ್ ಡಾಲರ್‌ಗಳಿಗಿಂತ ಹೆಚ್ಚು ಏರಿಕೆಯಾಗಿ ೬೯೭.೧೨೧ ಬಿಲಿಯನ್ ಅಮೆರಿಕನ್ ಡಾಲರ್‌ಗೆ ತಲುಪಿದೆ.  ಭಾರತೀಯ ರಿಸರ್ವ್ ಬ್ಯಾಂಕ್ ಪ್ರಕಾರ, ಏಪ್ರಿಲ್ ಮೊದಲ ವಾರದಲ್ಲಿ ದೇಶದ ವಿದೇಶಿ ವಿನಿಮಯ ಮೀಸಲು, ಬಲವಾದ ಚೇತರಿಕೆ ಕಂಡಿದ್ದು, ಹಿಂದಿನ ವಾರದ ಕುಸಿತದಿಂದ ಚೇತರಿಸಿಕೊಂಡಿದೆ.

<><><><>

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳ ನಡೆಯಲಿವೆ. ಮುಲ್ಲಾನ್‌ಪುರದ ಯದವೀಂದ್ರ ಸಿಂಗ್ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಮತ್ತು ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ.

ಚೆನ್ನೈನ ಎಂ.ಎ.ಚಿದಂಬರಂ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ಸಂಜೆ ೭.೩೦ ಕ್ಕೆ ಆರಂಭವಾಗಲಿರುವ ದಿನದ ಎರಡನೇ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಸೆಣಸಲಿವೆ.

<><><><>

ಕಿರ್ಗಿಸ್ತಾನ್‌ನ ಬಿಷ್ಕೆಕ್‌ನಲ್ಲಿ ನಡೆದ ೨೦೨೪ ರ ಏಷ್ಯನ್ ಕುಸ್ತಿ ಚಾಂಪಿಯನ್‌ಶಿಪ್‌ನ ಮಹಿಳೆಯರ ೫೩ ಕೆಜಿ ವಿಭಾಗದ ಫೈನಲ್‌ನಲ್ಲಿ ಭಾರತದ ಮೀನಾಕ್ಷಿ ಗೋಯತ್ ಪರಾಭವಗೊಂಡು ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟಿದ್ದಾರೆ. ಏತನ್ಮಧ್ಯೆ, ೬೫ ಕೆಜಿ ವಿಭಾಗದಲ್ಲಿ ಮೋನಿಕಾ ಮತ್ತು ೭೨ ಕೆಜಿ ವಿಭಾಗದಲ್ಲಿ ಹರ್ಷಿತಾ ಕಂಚಿನ ಪದಕ ತಮ್ಮದಾಗಿಸಿಕೊಂಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>